ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ಕೋವಿಡ್-19 ನಿರ್ವಹಣೆಯ ಬಗ್ಗೆ

ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

586(702) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮತ್ತು ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯವ್ಯಾಪಿ ಕೋವಿಡ್-19 ನಿರ್ವಹಣೆಯಲ್ಲಿ ಇರುವ ಕೊರೋನಾ ವಾರಿಯರ್ಸ್ ಆಗಿ ಕೆಲಸ ಮಾಡುತ್ತಿರುವವರ ಸಂಖ್ಯೆ ಎಷ್ಟು;

(ಆ) ಅವರುಗಳಲ್ಲಿ ವೈದ್ಯರು, ದಾದಿಯರು, ಪೊಲೀಸ್ ಸಿಬ್ಬಂದಿಗಳು, ಅಟೆಂಡರ್ಸ್‌ಗಳು ಎಷ್ಟು; (ತಾಲ್ಲೂಕುವಾರು, ಆಸ್ಪತ್ರೆವಾರು ವಿವರ ನೀಡುವುದು)

(ಇ) ಸದರಿ ವಾರಿಯರ್ಸ್‌ಗೆ ನೀಡುತ್ತಿರುವ ವೈದ್ಯಕೀಯ ಸೌಲಭ್ಯಗಳೇನು; ಆರ್ಥಿಕ ಸೌಲಭ್ಯಗಳೇನು; ಅವುಗಳಿಗೆ ಇಲ್ಲಿಯವರೆಗೆ ಮಾಡಿರುವ ವೆಚ್ಚವೆಷ್ಟು; (ವಿವರಗಳನ್ನು ನೀಡುವುದು)

(ಈ) ವಾರಿಯರ್ಸ್‌ಗಳ ಕರ್ತವ್ಯದ ಕಾಲಾವಧಿ ಏನು; ಕರ್ತವ್ಯದ ಅವಧಿಯ ನಂತರ ಕ್ವಾರಂಟೈನ್‌ಗೆ ಒಳಪಡುತ್ತಿದ್ದಾರೆಯೇ;

(ಉ) ಒಳಪಡುತ್ತಿದ್ದರೆ, ಅದರ ಸೌಲಭ್ಯಗಳನ್ನು ಬೆಂಗಳೂರು ಸೇರಿದಂತೆ ಯಾವ ಯಾವ ಭಾಗಗಳಲ್ಲಿ ಮಾಡಿಕೊಡಲಾಗಿದೆ; (ವಿವರಗಳನ್ನು ನೀಡುವುದು)

(ಊ) ಸರ್ಕಾರ ಇದಕ್ಕಾಗಿ ಇಲ್ಲಿಯವರೆಗೆ ಮಾಡಿರುವ ವೆಚ್ಚವೆಷ್ಟು? (ವಿವರಗಳನ್ನು ನೀಡುವುದು)